ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಅಭಿಯಂತರವರ ಕಛೇರಿ, ರಾಜರಾಜೇಶ್ವರಿನಗರ ವಲಯ, ಬೆಂಗಳೂರು-98

ಸಂಖ್ಯೆ:ಮುಅ/ರಾ.ರಾ.ನ/ಟಿ.ಎಸ್/47(1) /2022-23 ದಿನಾಂಕ:20.06.2022

"ಮಾರ್ಪಾಡಿತ ತಾಂತ್ರಿಕ ಮಂಜೂರಾತಿ"

ವಿಷಯ :- **Comprehensive Development of Roads and Drains in ward no.16 Rajarajeshwari Nagara Assembly Constituency under Package 2019-20 RRN DIV (01) Annexure-2 Sl no.663 and 1949 ರ ಮಾರ್ಪಾಡು** ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ

ಉಲ್ಲೇಖ :- ಮುಖ್ಯ ಅಭಿಯಂತರರು ರಾ.ರಾ.ನಗರ ವಲಯ ರವರ ತಾಂತ್ರಿಕ ಮಂಜೂರಾತಿ ಜ್ಞಾಪನ ಪತ್ರ ಸಂಖ್ಯೆ :ಮು.ಅ/ರಾ.ರಾ.ನ.ವ/ಟಿ.ಎಸ್/233/2019-20, ದಿನಾಂಕ:24.10.2019.

ಪ್ರಸ್ತಾವನೆ:-

ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು, ರಾ.ರಾ.ನಗರ ವಿಭಾಗ ರವರು ಮಾರ್ಪಡಿತ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಯನ್ನು ಕೋರಿರುವ ಮೇರೆಗೆ, ಮಾನ್ಯ ಆಯುಕ್ತರು ನಿಯೋಜಿಸಿರುವ ಅಧಿಕಾರ ಪ್ರತ್ಯಾಯೋಜನೆ ಆದೇಶ ಸಂ:ಬಿ12(1)ಪಿಆರ್/394/2021-22, ದಿನಾಂಕ:18.01.2022 ರಂತೆ ಸದರಿ ಕಾಮಗಾರಿಗೆ 2019-20ನೇ ಸಾಲಿನ ಲೆಕ್ಕಶೀರ್ಷಿಕೆ ಪಿ-3744 ರಲ್ಲಿ ಜಾಬ್ ಸಂಖ್ಯೆ 016-20-000018 ರಲ್ಲಿ ಅನುಮೋದನೆಗೊಂಡಿರುವ ಕಾಮಗಾರಿಯ ಅಂದಾಜು ಪಟ್ಟಿಗೆ ಉಲ್ಲೇಖ (1) ರ ತಾಂತ್ರಿಕ ಮಂಜೂರಾತಿಯನ್ನು ರದ್ದುಪಡಿಸಿ, ಮಾರ್ಪಾಡು ತಾಂತ್ರಿಕ ಮಂಜೂರಾತಿಯನ್ನು ರೂ.9,99,73,034/- (ಒಂಬತ್ತು ಕೋಟಿ ತ್ತೊಂಬತ್ತೊಂಬತ್ತು ಲಕ್ಷದ ಎಪ್ಪತ್ತ ಮೂರು ಸಾವಿರದ ಮೂವತ್ತಾ ನಾಲ್ಕು ರೂಪಾಯಿ) ರ ತಾಂತ್ರಿಕ ಮಂಜೂರಾತಿಯ ಪುಸ್ತಕದ ಪುಟ ಸಂಖ್ಯೆ:14-15 ರ ಕ್ರಮ ಸಂಖ್ಯೆ:47(1) ರಲ್ಲಿ ದಾಖಲಿಸಿ ಈ ಕೆಳಗಿನ ಷರತ್ತುಗೊಳಪಟ್ಟಂತೆ ಅನುಮೋದನೆ ನೀಡಲಾಗಿದೆ.

ಷರತ್ತುಗಳು :-

1. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮ 2000 ಪ್ರಕಾರ ಕಾಮಗಾರಿಯ ಟೆಂಡರ್ ಕರೆಯುವಲ್ಲಿ ಸೂಕ್ತ ಕ್ರಮ ಅನುಸರಿಸತಕ್ಕದ್ದು.
2. ಅಂದಾಜುಪಟ್ಟಿಯ ಮೊತ್ತವು ಮಂಜೂರಾತಿಯಾದ ಮೊತ್ತಕ್ಕಿಂತ ಮೀರಬಾರದು, ಹಾಗೂ ಕಾಮಗಾರಿಗೆ ಮಂಜೂರಾದ ಮೊತ್ತದ ಹಣವನ್ನು ಅದೇ ಕಾಮಗಾರಿಗೆ ಉಪಯೋಗಿಸತಕ್ಕದ್ದು.
3. ಕಾಮಗಾರಿಯನ್ನು ಐ.ಆರ್.ಸಿ/ಐ.ಎಸ್. ಮಾರ್ಗ ಸೂಚಿಗಳಂತೆ, ಮತ್ತು ನಿಗಧಿತ ವಿಶಿಷ್ಟ ವಿವರಣೆಯ (Standard Specification) ಪ್ರಕಾರ ನಿರ್ವಹಿಸತಕ್ಕದ್ದು.
4. ಕಾಮಗಾರಿ ಪೂರ್ಣಗೊಂಡ ನಂತರ ನಿಗಧಿತ ಅವಧಿಯೊಳಗೆ ಯುಟಿಲೈಜೇಷನ್ ಪ್ರಮಾಣ ಪತ್ರ ಹಾಗೂ ಕಾಮಗಾರಿ ಪೂರ್ಣಗೊಂಡ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.
5. ಮಂಜೂರಾದ ಕಾಮಗಾರಿಯಲ್ಲಿ ಯಾವುದೇ ಬದಲಾವಣೆ ಅಥವಾ ಮಾರ್ಪಾಡು ಆಗಿದ್ದಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.

ಪು.ತಿ.ನೋ...

Scanned with CamScanner